# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 1037 (1165)

**ಸದಸ್ಯರ ಹೆಸರು** : ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)

**ಉತ್ತರಿಸಬೇಕಾದ ದಿನಾಂಕ** : 07-03-2022

**ಉತ್ತರಿಸಬೇಕಾದ ಸಚಿವರು** : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ನೂತನ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರಾಜ್ಯದಲ್ಲಿ ಯಾವ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲಾಗುವುದು; ಈ ನೀತಿಯನ್ನು ಜಾರಿಗೊಳಿಸಲು ಅಗತ್ಯವಿರುವ ನಿಯಮ ಮತ್ತು ರೂಪುರೇಷಗಳನ್ನು ಅಂತಿಮಗೊಳಿಸಲಾಗಿದೆಯೇ; (ವಿವರ ನೀಡುವುದು) | ರಾಷ್ಟ್ರೀಯ ಶಿಕ್ಷಣ ನೀತಿ 2020ನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಈಗಾಗಲೇ ಶಿಕ್ಷಣ ಇಲಾಖೆ ಕಾರ್ಯಪ್ರವೃತ್ತರಾಗಿದ್ದು, ಅನುಷ್ಠಾನ ಕಾರ್ಯಪಡೆಯ ಶಿಫಾರಸ್ಸಿನಂತೆ ಹಂತ ಹಂತವಾಗಿ ಜಾರಿಗೆ ತರಲಾಗುತ್ತಿದೆ.<br><br>ಕರ್ನಾಟಕ ಸರ್ಕಾರವು ರಾಷ್ಟ್ರೀಯ ಶಿಕ್ಷಣ ನೀತಿ 2020ನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು 04 ಮಾರ್ಚ್ 2020 ರಂದು ಒಂದು ಅನುಷ್ಠಾನ ಕಾರ್ಯಪಡೆಯನ್ನು ರಚಿಸಿದೆ.<br>• ಶಿಕ್ಷಣ ಮಂತ್ರಾಲಯ, ಭಾರತ ಸರ್ಕಾರ, ಇವರಿಂದ ನೀಡಿರುವ ರಾಷ್ಟ್ರೀಯ ಶಿಕ್ಷಣ ನೀತಿ 2020ರ ಕಾಲಸೂಚಿಯಂತೆ ಅನುಷ್ಠಾನ ಕ್ರಮಗಳನ್ನು ಕೈಗೊಳ್ಳಲು ರಾಜ್ಯ ಸರ್ಕಾರ ಹಾಗೂ ಇಲಾಖೆಯು ಕಾರ್ಯ ಪ್ರವೃತ್ತವಾಗಿರುತ್ತದೆ.<br>• ಶಿಕ್ಷಣ ನೀತಿಯ ಅನುಷ್ಠಾನ ಚೌಕಟ್ಟಿನ ರೂಪುರೇಷೆಯನ್ನು ವಿನ್ಯಾಸಗೊಳಿಸಲು ಉಪಸಮಿತಿಗಳನ್ನು ರಚಿಸಲಾಗಿದೆ.<br>• ಅದರಂತೆ, ಉಪಸಮಿತಿಗಳು ರಾಷ್ಟ್ರೀಯ ಶಿಕ್ಷಣ ನೀತಿ 2020ರ ಸಮಗ್ರ ದೃಷ್ಟಿಕೋನವನ್ನು ಅರ್ಥ ಮಾಡಿಕೊಳ್ಳಲು ಮತ್ತು ರಾಜ್ಯದಲ್ಲಿ ಈ ನೀತಿಯ ಯಶಸ್ವಿ ಅನುಷ್ಠಾನಕ್ಕೆ ಪರಿಣಾಮಕಾರಿಯಾದ ವಿಧಾನಗಳನ್ನು ಅನ್ವೇಷಿಸಲು ಸಮಗ್ರವಾದ ಸಂವಾದಗಳನ್ನು ಕೈಗೊಂಡು ವರದಿಗಳನ್ನು ಪಡೆಯುವ ಪ್ರಕ್ರಿಯೆ ಜಾರಿಯಲ್ಲಿದೆ.<br>• ಶಾಲಾ ಶಿಕ್ಷಣಕ್ಕಾಗಿ ಪ್ರಮುಖವಾದ ಪಠ್ಯಕ್ರಮ ಮತ್ತು ಬೋಧನಾ/ಕಲಿಕಾ ಪದ್ಧತಿ ರೂಪಿಸುವ ನಿಟ್ಟಿನಲ್ಲಿ ರಾಜ್ಯ ಫೋಕಸ್ ಗ್ರೂಪ್‌ಗಳು ಪೊಸಿಷನ್ ಪೇಪರ್ ಸಿದ್ಧಪಡಿಸುವ |

| | | |
|---|---|---|
| | | ಕಾರ್ಯದಲ್ಲಿ ತೊಡಗಿರುತ್ತದೆ. ಇಲಾಖೆಯು ಎಲ್ಲ ಹಂತಗಳ ಪಠ್ಯಕ್ರಮ ವಿನ್ಯಾಸ ಸಿದ್ಧವಾದ ನಂತರ ಶಿಕ್ಷಕರ ವೃತ್ತಿಪರ ತರಬೇತಿಗಳನ್ನು ಕೈಗೊಳ್ಳುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತವಾಗುತ್ತದೆ.<br><br>ರಾಷ್ಟ್ರೀಯ ಶಿಕ್ಷಣ ನೀತಿ 2020ರ ಸಂಬಂಧ ಶಿಕ್ಷಣ ಮಂತ್ರಾಲಯ, ಭಾರತ ಸರ್ಕಾರ, ಇವರು ನೀಡಿರುವ Task Points ಗಳನ್ನು 2020 ರಿಂದ 2030 ರವರೆಗಿನ ಕಾಲಸೂಚಿಯಲ್ಲಿ ಅನುಷ್ಠಾನ ಮಾಡಲು ಕ್ರಮ ಕೈಗೊಂಡಿದೆ. |
| ಆ) | ನೂತನ ರಾಷ್ಟ್ರೀಯ ಶಿಕ್ಷಣ ನೀತಿಯ ಪ್ರಕಾರ ಶಾಲಾ-ಕಾಲೇಜುಗಳಲ್ಲಿ ಇರಬೇಕಾದ ಅಗತ್ಯ ಮೂಲ ಸೌಲಭ್ಯಗಳೇನು; ಈ ನೀತಿಯಂತೆ ರಾಜ್ಯದಲ್ಲಿರುವ ಎಲ್ಲಾ ಶಾಲಾ - ಕಾಲೇಜುಗಳಲ್ಲಿ ಅಳವಡಿಸುತ್ತಿರುವ ಪಠ್ಯಕ್ರಮವನ್ನು ಅಂತಿಮಗೊಳಿಸಲಾಗಿದೆಯೇ; ಹಾಗಿದ್ದಲ್ಲಿ, ಪಠ್ಯಕ್ರಮದ ವಿವರ ನೀಡುವುದು; | ಶಾಲಾ ಕಾಲೇಜುಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡುವ ನಿಟ್ಟಿನಲ್ಲಿ ಸುಸಜ್ಜಿತ ಕಟ್ಟಡ, ಕುಡಿಯುವ ನೀರು, ಶೌಚಾಲಯ, ಗ್ರಂಥಾಲಯ, ಪ್ರಯೋಗಾಲಯಗಳು, ಆಟದ ಮೈದಾನ, ಶಾಲಾ ಕಾಂಪೌಂಡ್, ವಿಶೇಷ ಅಗತ್ಯತೆಯುಳ್ಳ ಮಕ್ಕಳಿಗೆ ಶೌಚಾಲಯ, ರಾಂಪ್ಸ್ ಇತ್ಯಾದಿಗಳ ಮೂಲಕ ವಿದ್ಯಾರ್ಥಿಗಳಿಗೆ ಒತ್ತಡವಿಲ್ಲದ ಉತ್ತಮವಾದ ಕಲಿಕಾ ವಾತಾವರಣವನ್ನು ಒದಗಿಸುವಂತೆ ಶಿಫಾರಸ್ಸು ಮಾಡಲಾಗಿದೆ.<br><br>ರಾಷ್ಟ್ರೀಯ ಶಿಕ್ಷಣ ನೀತಿ 2020ರ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಅನುಷ್ಠಾನ ಕಾರ್ಯಪಡೆಯು ಶಾಲಾ ಶಿಕ್ಷಣಕ್ಕೆ ಸಂಬಂಧಪಟ್ಟಂತೆ ಪಠ್ಯಕ್ರಮ ವಿನ್ಯಾಸದಲ್ಲಿ ಹಾಗೂ ಕಲಿಕಾ ಬೋಧನಾ ಮತ್ತು ಶಿಕ್ಷಣ ಶಾಸ್ತ್ರದಲ್ಲಿ ಬದಲಾವಣೆಗಳನ್ನು ಶಿಫಾರಸ್ಸು ಮಾಡಲಾಗಿದೆ. ಸದರಿ ಶಿಫಾರಸ್ಸುಗಳಂತೆ ಇಲಾಖೆಯು ಕಾರ್ಯಪ್ರವೃತ್ತರಾಗಿ ಎನ್.ಇ.ಪಿ. 2020ರ ಅನುಷ್ಠಾನ ಕಾರ್ಯಪಡೆ ಸೂಚಿಸಿದಂತೆ ಪಠ್ಯಕ್ರಮ ಸಿದ್ಧಪಡಿಸಲು ಈ ಕೆಳಕಂಡ ಕಾರ್ಯಗಳನ್ನು ಜಾರಿಗೊಳಿಸಲಾಗಿದೆ.<br><br>1. ಪೊಸಿಷನ್ ಪೇಪರ್ ರಚನೆ<br>2. ಪಠ್ಯಕ್ರಮ ರಚನೆಗಾಗಿ ರಾಜ್ಯ ಫೋಕಸ್ ತಂಡಗಳ ರಚನೆ<br>3. ಪೂರ್ವಬಾಲ್ಯಾವಸ್ಥೆಗಾಗಿ ಪಠ್ಯಕ್ರಮ ರಚನಾ ತಂಡಗಳು<br>4. ಪಠ್ಯಕ್ರಮ ರಚನಾ ತಂಡಗಳ ಮೂಲಕ ಎನ್.ಸಿ.ಎಫ್. ಶಿಫಾರಸ್ಸುಗಳ ಆಧಾರದ ಮೇಲೆ ಪಠ್ಯಕ್ರಮ ರಚನಾ ಕಾರ್ಯವನ್ನು ಕೈಗೊಳ್ಳಲಾಗುವುದು. |
| ಇ) | ಈ ನೀತಿಯಂತೆ ಶಾಲಾ-ಕಾಲೇಜುಗಳಲ್ಲಿ ಬೋಧನೆ ಮಾಡುವ ಶಿಕ್ಷಕರಿಗೆ ನಿಗಧಿಪಡಿಸಿರುವ ಶೈಕ್ಷಣಿಕ ಅರ್ಹತೆಗಳೇನು; ಮತ್ತು ಈ ಅರ್ಹತೆ | • ಪ್ರಸ್ತುತ ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ನೇಮಕವಾಗುವ ಶಿಕ್ಷಕರು ಪಿ.ಯು.ಸಿ., ಡಿ.ಇಡಿ/ಟಿ.ಸಿ.ಹೆಚ್. ಹಾಗೂ ಪ್ರೌಢ ಶಾಲೆಗಳಿಗೆ ನೇಮಕವಾಗುವ ಶಿಕ್ಷಕರು ಬಿ.ಎ/ಬಿ.ಎಸ್ಸಿ-ಬಿ.ಇಡಿ |

| | | |
|---|---|---|
| | ಹೊಂದಿರುವ ಎಷ್ಟು ಶಿಕ್ಷಕರ ಅವಶ್ಯಕತೆ ರಾಜ್ಯಕ್ಕಿದೆ; ಎಷ್ಟು ಶಿಕ್ಷಕರು ಲಭ್ಯರಿದ್ದಾರೆ; ಈ ಸಂಬಂಧ ಶಿಕ್ಷಕರಿಗೆ ಅಗತ್ಯ ತರಬೇತಿಗಳನ್ನು ನೀಡಲಾಗಿದೆಯೇ; (ವಿವರ ನೀಡುವುದು) | ಕನಿಷ್ಠ ವಿದ್ಯಾರ್ಹತೆ ಹೊಂದಿರಬೇಕಾಗುತ್ತದೆ.<br>• ಎಲ್ಲಾ ಸರ್ಕಾರಿ / ಅನುದಾನಿತ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೆ ಎನ್.ಇ.ಪಿ. ನಿಷ್ಠಾ-1.0, ನಿಷ್ಠಾ-2.0 ಹಾಗೂ ನಿಷ್ಠಾ-3.0 ತರಬೇತಿಯನ್ನು ನೀಡಲಾಗಿದೆ. |
| ಈ) | ರಾಜ್ಯದಲ್ಲಿ ನೂತನ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೊಳಿಸಲು ಅಗತ್ಯವಿರುವ ವಾರ್ಷಿಕ ಅನುದಾನವೆಷ್ಟು; ಈ ನೀತಿಯನ್ನು ಅನುಷ್ಠಾನಗೊಳಿಸಲು ಮೀಸಲಿಟ್ಟಿರುವ ಅನುದಾನವೆಷ್ಟು; ಇದಕ್ಕಾಗಿ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರವು ಇಲ್ಲಿಯವರೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು?(ವಿವರ ನೀಡುವುದು) | ರಾಷ್ಟ್ರೀಯ ಶಿಕ್ಷಣ ನೀತಿ 2020ರ ಸಂಬಂಧ ಶಿಕ್ಷಣ ಮಂತ್ರಾಲಯ, ಭಾರತ ಸರ್ಕಾರ, ಇವರು ನೀಡಿರುವ Task Points ಗಳನ್ನು 2020 ರಿಂದ 2030 ರವರೆಗಿನ ಕಾಲಸೂಚಿಯಲ್ಲಿ ಅನುಷ್ಠಾನ ಮಾಡಲು ರಾಜ್ಯ ಸರ್ಕಾರ ಹಾಗೂ ಇಲಾಖೆಯು ಕ್ರಮ ಕೈಗೊಂಡಿದೆ.<br><br>ನೂತನ ರಾಷ್ಟ್ರೀಯ ಶಿಕ್ಷಣ ನೀತಿ 2020ರ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರದ ಆದೇಶದನ್ವಯ ಲೆಕ್ಕ ಶೀರ್ಷಿಕೆ 2202-01-113-0-01-059 ಅಡಿಯಲ್ಲಿ ರೂ. 200.00 ಲಕ್ಷಗಳ ಅನುದಾನವನ್ನು ಸಮಗ್ರ ಶಿಕ್ಷಣ ಕರ್ನಾಟಕ ಕಛೇರಿಗೆ ಬಿಡುಗಡೆಯಾಗಿದೆ. (ಅನುಬಂಧದಲ್ಲಿರಿಸಿದೆ)<br>ಶಿಕ್ಷಣ ಸಚಿವಾಲಯ, ಭಾರತ ಸರ್ಕಾರದ ಯೋಜನಾ ಅನುಮೋದನಾ ಮಂಡಳಿಯು (ಪಿ.ಎ.ಬಿ) 2021-22ನೇ ಸಾಲಿಗೆ ರಾಷ್ಟ್ರೀಯ ಶಿಕ್ಷಣ ನೀತಿ 2020ರ ಅನುಷ್ಠಾನದಡಿ ಬುನಾದಿ ಸಾಕ್ಷರತೆ ಮತ್ತು ಸಂಖ್ಯಾಜ್ಞಾನ ಕಾರ್ಯಕ್ರಮವನ್ನು ಕಾರ್ಯಗತಗೊಳಿಸಲು ಒಟ್ಟು ಮೊತ್ತ ರೂ.8389.67 ಲಕ್ಷಗಳನ್ನು ಅನುಮೋದಿಸಿದೆ. |

**ಇಪಿ 93 ಪಿಜಿಸಿ 2022**

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2021–22ನೇ ಸಾಲಿಗೆ ರಾಜ್ಯದಲ್ಲಿ ನೂತನ ರಾಷ್ಟ್ರೀಯ ಶಿಕ್ಷಣ ನೀತಿ–2020 ಅನ್ನು ಅನುಷ್ಠಾನಗೊಳಿಸುವ ಕುರಿತು.

ಓದಲಾಗಿದೆ : 1. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು, ಇವರ ಏಕಕಡತ ಪ್ರಸ್ತಾವನೆ ಸಂಖ್ಯೆ: ರಾ.ಶಿ.ನೀತಿ/02ಬಿ/2020–21, ದಿನಾಂಕ:15.07.2021.

2. ಸರ್ಕಾರದ ಆದೇಶ ಸಂಖ್ಯೆ: ಆಇ 94 ಬಿಆರ್‌ಎಸ್ 2021, ದಿನಾಂಕ:11.10.2021.

******

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ (1)ರ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು, ಇವರ ಪ್ರಸ್ತಾವನೆಯಲ್ಲಿ, ನೂತನ ರಾಷ್ಟ್ರೀಯ ಶಿಕ್ಷಣ ನೀತಿ–2020ರ ಅನುಸಾರ ರಾಜ್ಯದಲ್ಲಿ ಪಠ್ಯಕ್ರಮದ ಚೌಕಟ್ಟನ್ನು ರಚಿಸಲು ಪ್ರೊ. ಕೆ. ರಾಮಚಂದ್ರನ್, ಸೀನಿಯರ್ ಅಡ್ವೈಸರ್, National Institute of Educational Planning and Administration (NIEPA), ನವದೆಹಲಿ, ಇವರ ಅಧ್ಯಕ್ಷತೆಯಲ್ಲಿ ಕೋರ್ ಕಮಿಟಿಯನ್ನು ರಚಿಸಿ ಈ ಕೆಳಕಂಡಂತೆ ನಾಲ್ಕು ಕ್ಷೇತ್ರಗಳಲ್ಲಿ ರಾಜ್ಯ ಪಠ್ಯಕ್ರಮದ ಚೌಕಟ್ಟನ್ನು ರಚಿಸಬೇಕಾಗಿದ್ದು,

1. ಶಾಲಾ ಶಿಕ್ಷಣದ ರಾಜ್ಯ ಪಠ್ಯಕ್ರಮ ಚೌಕಟ್ಟು
2. ಇ.ಸಿ.ಸಿ.ಇ ರಾಜ್ಯ ಪಠ್ಯಕ್ರಮ ಚೌಕಟ್ಟು
3. ಶಿಕ್ಷಕರ ಶಿಕ್ಷಣದ ರಾಜ್ಯ ಪಠ್ಯಕ್ರಮ ಚೌಕಟ್ಟು
4. ವಯಸ್ಕರ ಶಿಕ್ಷಣದ ರಾಜ್ಯ ಪಠ್ಯಕ್ರಮ ಚೌಕಟ್ಟು.

ತತ್ಸಂಬಂಧ ವಿವಿಧ ಸಮಿತಿಗಳನ್ನು ನೇಮಕ ಮಾಡಿ, ನೂತನ ರಾಷ್ಟ್ರೀಯ ಶಿಕ್ಷಣ ನೀತಿ–2020ರ ಅನುಸಾರ ರಾಜ್ಯ ಪಠ್ಯಕ್ರಮದ ಚೌಕಟ್ಟನ್ನು ರಚಿಸಬೇಕಾಗಿರುವುದರಿಂದ, ಈ ಕೆಳಕಂಡಂತೆ ಒಟ್ಟಾರೆಯಾಗಿ ರೂ.572.17 ಲಕ್ಷಗಳ ಅನುದಾನ ಒದಗಿಸಿ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವಂತೆ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು, ಇವರು ಕೋರಿರುತ್ತಾರೆ.

| ಕ್ರಸಂ | ವಿಷಯ | ಅಗತ್ಯವಿರುವ ಅನುದಾನ (ರೂ. ಲಕ್ಷಗಳಲ್ಲಿ) |
|---|---|---|
| 1 | ಪೊಸಿಷನ್ ಪೇಪರ್ ಸಿದ್ಧತೆ | 82.22 |

2304
0 NOV 2021

| | | |
|---|---|---|
| 2 | ರಾಜ್ಯ ಹಂತದ ನಾಲ್ಕು ಚಾಲನಾ ಸಮಿತಿಗಳಿಗೆ | 63.00 |
| 3 | ತಾಂತ್ರಿಕ ವೇದಿಕೆಗೆ ಅಗತ್ಯ ಅನುದಾನ | 23.00 |
| 4 | ಇ.ಸಿ.ಸಿ.ಇ ವಿಷಯ ಉಪಸಮಿತಿಗಾಗಿ | 07.15 |
| 5 | ಪ್ರಾಥಮಿಕ ಮತ್ತು ಮಾಧ್ಯಮಿಕ ಹಂತದ ಉಪಸಮಿತಿಗಾಗಿ | 57.20 |
| 6 | ಪ್ರೌಢ ಹಂತದ ಉಪಸಮಿತಿಗಳಿಗಾಗಿ | 71.50 |
| 7 | ಉನ್ನತ ಪ್ರೌಢ ಹಂತದ ಉಪಸಮಿತಿಗಳಿಗಾಗಿ | 243.10 |
| 8 | ಅನುವಾದ ಮತ್ತು ದಾಖಲೀಕರಣ | 25.00 |
| | ಒಟ್ಟು | 572.17 |
| | | |

ಮೇಲೆ ಓದಲಾದ ಕ್ರಮಾಂಕ (2)ರ ಸರ್ಕಾರದ ಆದೇಶದಲ್ಲಿ, 2021-22ನೇ ಸಾಲಿಗೆ ರಾಜ್ಯದಲ್ಲಿ ನೂತನ ರಾಷ್ಟ್ರೀಯ ಶಿಕ್ಷಣ ನೀತಿ-2020 ಅನ್ನು ಅನುಷ್ಠಾನಗೊಳಿಸುವ ಸಂಬಂಧ ಸಮಗ್ರ ಶಿಕ್ಷಣ ಕರ್ನಾಟಕ ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ:2202-01-113-0-01-059 (ಇತರೆ ಖರ್ಚುಗಳು) ಗೆ ಹೆಚ್ಚುವರಿಯಾಗಿ ರೂ.200.00 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗಿದ್ದು, ಸದರಿ ಹೆಚ್ಚುವರಿ ಅನುದಾನವನ್ನು 2021-22ನೇ ಸಾಲಿನ ಪೂರಕ ಅಂದಾಜುಗಳು 2ನೇ ಕಂತಿನಲ್ಲಿ ಒದಗಿಸುವ ಮೂಲಕ ಕ್ರಮಬದ್ಧಗೊಳಿಸಲಾಗುವುದು ಎಂದು ತಿಳಿಸಲಾಗಿದೆ.

ಪ್ರಸ್ತಾವನೆಯಲ್ಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಪಿ 73 ಯೋಯೋಕ 2021 ಬೆಂಗಳೂರು**

**ದಿನಾಂಕ: 27ನೇ ಅಕ್ಟೋಬರ್ 2021**

2021-22ನೇ ಸಾಲಿಗೆ ರಾಜ್ಯದಲ್ಲಿ ನೂತನ ರಾಷ್ಟ್ರೀಯ ಶಿಕ್ಷಣ ನೀತಿ-2020ರ ಅನುಸಾರ ರಾಜ್ಯ ಪಠ್ಯಕ್ರಮದ ಚೌಕಟ್ಟನ್ನು ರಚಿಸಲು ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು, ಇವರು ಸಲ್ಲಿಸಿರುವ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿ ಆದೇಶಿಸಿದೆ

ಸದರಿ ಕಾರ್ಯಕ್ರಮವನ್ನು ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಬೆಂಗಳೂರು, ಇವರು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಹಾಗೂ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು, ಇವರ ಮಾರ್ಗದರ್ಶನದೊಂದಿಗೆ ಅನುಷ್ಠಾನಗೊಳಿಸತಕ್ಕದ್ದು

ಸದರಿ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ತಗಲುವ ವೆಚ್ಚವನ್ನು 2021-22ನೇ ಸಾಲಿಗೆ ಸಮಗ್ರ ಶಿಕ್ಷಣ ಕರ್ನಾಟಕ ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ 2202-01-113-0-01-059 (ಇತರೆ ಖರ್ಚುಗಳು) ಅಡಿಯಲ್ಲಿ ಹೆಚ್ಚುವರಿಯಾಗಿ ಒದಗಿಸಲಾಗುವ ರೂ.200.00 ಲಕ್ಷಗಳ ಅನುದಾನದಿಂದ ನಿಯಮಾನುಸಾರ ಭರಿಸತಕ್ಕದ್ದು.

ಮೇಲ್ಕಂಡಂತೆ ಒದಗಿಸಲಾದ ಅನುದಾನಕ್ಕೆ ಪರಿಷ್ಕೃತ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರಿಂದ ಅನುಮೋದನೆ ಪಡೆಯತಕ್ಕದ್ದು ಹಾಗೂ ಭರಿಸಲಾಗುವ ವೆಚ್ಚಗಳಿಗೆ ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಬೆಂಗಳೂರು, ಇವರು, ಸೂಕ್ತ ಲೆಕ್ಕ ಪತ್ರಗಳನ್ನು ಇಡತಕ್ಕದ್ದು.

ಒದಗಿಸಲಾದ ಅನುದಾನದ ಮಿತಿಯೊಳಗೆ ಹಾಗೂ ಸರ್ಕಾರದಿಂದ ಯಾವುದೇ ಹೆಚ್ಚುವರಿ ಅನುದಾನ ಕೋರದಂತೆ, 2021-22ನೇ ಆರ್ಥಿಕ ಸಾಲಿನ ಅಂತ್ಯದೊಳಗೆ ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಕ್ರಮವಹಿಸತಕ್ಕದ್ದು.

ಸದರಿ ಕಾರ್ಯಕ್ರಮದ ಅಡಿಯಲ್ಲಿ ಖರೀದಿಗಳಿಗೆ ಸಂಬಂಧಿಸಿದಂತೆ ಎಲ್ಲಾ ಖರೀದಿ ನಿಯಮಗಳನ್ನು ಹಾಗೂ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999 ಮತ್ತು ಅದರಡಿಯಲ್ಲಿ ಹೊರಡಿಸಲಾದ ನಿಯಮಗಳನ್ನು ಚಾಚೂ ತಪ್ಪದೇ ಕಡ್ಡಾಯವಾಗಿ ಹಾಗೂ ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ಸದರಿ ಯೋಜನೆಯ ಶೀಘ್ರ ಅನುಷ್ಠಾನಕ್ಕಾಗಿ ಆರ್ಥಿಕ ಮತ್ತು ಭೌತಿಕ ಗುರಿಗಳನ್ನು ನಿಗದಿಪಡಿಸತಕ್ಕದ್ದು ಹಾಗೂ ಅದರನ್ವಯ ಭರಿಸಲಾಗುವ ವೆಚ್ಚದ ವಿವರಗಳನ್ನು ಪ್ರತಿ ಮಾಹೆ ಹೊಸ ಡಿಜಿಟಲ್ ಸಪೋರ್ಟ್ ಸಿಸ್ಟಂ (ಅವಲೋಕನ) ತಂತ್ರಾಂಶದಲ್ಲಿ ಕಡ್ಡಾಯವಾಗಿ ಇಂದೀಕರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 94 ಬಿಆರ್‌ಎಸ್ 2021, ದಿನಾಂಕ:11.10.202 ರಲ್ಲಿ ನೀಡಿರುವ ಸಹಮತದನ್ವಯ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಆಇ 01 ಟಿ.ಎಫ್.ಪಿ 2021, ದಿನಾಂಕ:30.09.2021 ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಆರ್.ಎಸ್.ನಾಥನ್) 27.10.2
ವಿಶೇಷಾಧಿಕಾರಿ ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ (ಯೋಜನೆ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ (ಆಡಿಟ್ 1 & 2) ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.
4. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.